# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : **856** |
| ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : **15.12.2025** |
| ಉತ್ತರಿಸುವ ಸಚಿವರು | : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಸರ್ಕಾರ ಅಂತ್ಯೋದಯ ಮತ್ತು ಬಿಪಿಎಲ್ ಪಡಿತರದಾರರಿಗೆ ನೀಡುತ್ತಿರುವ ಅಕ್ಕಿಯೂ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿರುತ್ತದೆ.<br>ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ ಕ್ರಮವಹಿಸಲಾಗುತ್ತಿದೆ.</td></tr>
<tr><td>ಆ</td><td>ಕೇಂದ್ರ ಸರ್ಕಾರದ ನೀತಿ ಆಯೋಗ ಪ್ರಕಾರ ರಾಜ್ಯದಲ್ಲಿ ಬಡತನ ಪ್ರಮಾಣ ಕಡಿಮೆಯಾಗಿದ್ದರೂ 1.47 ಕೋಟಿ ಬಿಪಿಎಲ್ ಕುಟುಂಬಗಳು ಇರುವುದು ನಿಜವೇ;</td><td>ರಾಜ್ಯದಲ್ಲಿ ಈ ಕೆಳಕಂಡಂತೆ ಆದ್ಯತಾ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತವೆ.
<table>
<tr><th>ಪಡಿತರ ವಿಧ</th><th>ಪಡಿತರ ಚೀಟಿ ಸಂಖ್ಯೆ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>ಅಂತ್ಯೋದಯ ಅನ್ನ ಪಡಿತರ ಚೀಟಿ</td><td>10,53,626</td><td>43,13,141</td></tr>
<tr><td>ಆದ್ಯತಾ ಪಡಿತರ ಚೀಟಿ</td><td>1,14,10,57</td><td>4,00,57,222</td></tr>
<tr><td>ಒಟ್ಟು</td><td>1,24,64,183</td><td>4,43,70,363</td></tr>
</table></td></tr>
<tr><td>ಇ</td><td>ಯೋಜನೆಗಳ ಸೌಲಭ್ಯ ಪಡೆಯುವ ಸಲುವಾಗಿ ಬೋಗಸ್ ಕಾರ್ಡುಗಳ ದುರುಪಯೋಗವಾಗುತ್ತಿದ್ದು ಇಂತಹ ಅಕ್ರಮಗಳನ್ನು ತಡೆಗಟ್ಟಿ ನಿಜವಾದ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯಗಳು ಸಿಗುವಂತೆ ಸರ್ಕಾರ ಕ್ರಮ ವಹಿಸುತ್ತಿದೆಯೇ?</td><td>ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ.<br>1. CBDT Income Group Annual Income > 1,20,000<br>2. GSTN Gross Turnover >25 Lacs<br>3. MCA Individual as Director<br>4. PDS Duplicate RC Inter State<br>5. PDS Duplicate RC Intra State<br>6. PDS RC Member Above 100 Years<br>7. PDS Silent RC >12 Months<br>8. PDS Silent RC 6-12 Months<br>9. PDS Single Member Below 18 Years<br>10. PM KISAN Land Holding >7.5 Acres<br>11. UIDAI Aadhaar Status Deceased</td></tr>
</table>

| | | |
|---|---|---|
| | | **12. Vehicle Ownership value Owning LIGHT MOTOR VEHICLE**<br>**13. Vehicle Ownership value Owning MEDIUM MOTOR VEHICLE**<br>**14. Vehicle Ownership value Owning OTHER THAN MENTIONED ABOVE**<br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು **2017** ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br><br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ **03** ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ **1000** ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. **1.20** ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br><br>ಸದರಿ ಮಾನದಂಡಗಳ ವಿರುದ್ಧವಾಗಿ ಪಡೆದಿರುವ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆಹಚ್ಚಿ ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗುತ್ತಿದೆ. |

ಇ-ಆನಾಸ **341** ಡಿಆರ್‌ಎ **2025**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು